ಕರ್ನಾಟಕ ಸರ್ಕಾರ

ಡಿಸೆಂಬರ್ 26 , 2016

# ಎತ್ತಿನ ಹೊಳೆ ಯೋಜನೆ ಸ್ಥಗಿತಗೊಳಿಸುವುದಿಲ್ಲ : ಸಿದ್ದರಾಮಯ್ಯ



**ಬೆಂಗಳೂರು, ಡಿಸೆಂಬರ್ 26:**

ರಾಜ್ಯ ಏಳು ಜಿಲ್ಲೆಗಳ 68 ಲಕ್ಷ ಜನರಿಗೆ ಕುಡಿಯುವ ನೀರು ಒದಗಿಸಲಿರುವ ಎತ್ತಿನ ಹೊಳೆ ಯೋಜನೆಯನ್ನು ರಾಜ್ಯ ಸರ್ಕಾರ ಯಾವುದೇ ಕಾರಣಕ್ಕೂ ಸ್ಥಗಿತಗೊಳಿಸುವುದಿಲ್ಲ ಎಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಇಲ್ಲಿ ಇಂದು ಸ್ಪಷ್ಟಪಡಿಸಿದರು.

ಎತ್ತಿನ ಹೊಳೆ ಸಮಗ್ರ ಕುಡಿಯುವ ನೀರು ಯೋಜನೆಗೆ ಸಂಬಂಧಿಸಿದಂತೆ ತಮ್ಮ ಗೃಹ ಕಚೇರಿ ಕೃಷ್ಣಾದಲ್ಲಿ ನಡೆದ ಯೋಜನಾ ವ್ಯಾಪ್ತಿಯ ಸಚಿವರು, ಶಾಸಕರು, ಗಣ್ಯರು ಹಾಗೂ ತಂತ್ರಜ್ಞರ ಸಭೆಯಲ್ಲಿ ಅವರು ಮಾತನಾಡುತ್ತಿದ್ದರು.

ರಾಜ್ಯದ ಪೂರ್ವ ಭಾಗದ ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ರಾಮನಗರ, ತುಮಕೂರು, ಹಾಸನ ಹಾಗೂ ಚಿಕ್ಕಮಗಳೂರು ಜಿಲ್ಲೆಗಳ ಕೆಲ ಭಾಗಗಳಿಗೆ ಕುಡಿಯುವ ನೀರನ್ನು ಒದಗಿಸಲು ಯೋಜಿಸಿರುವ ಈ ಯೋಜನೆಯು ಮೂಲಭೂತ ಅವಶ್ಯಕತೆಯಾದ ಕುಡಿಯುವ ನೀರು ಒದಗಿಸಲು ಮಾತ್ರ ಸೀಮೀತವಾಗಿದೆ. ಯಾವುದೇ ಕಾರಣಕ್ಕೂ ನೀರಾವರಿಗೆ ಬಳಕೆ ಮಾಡುವ ಉದ್ದೇಶವಿಲ್ಲ. ಇದರಿಂದ ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳ ಜನರಿಗೆ ಯಾವುದೇ ತೊಂದರೆ ಆಗುವುದಿಲ್ಲ ಎಂದು ಮುಖ್ಯಮಂತ್ರಿ ಭರವಸೆ ನೀಡಿದರು.

ಎತ್ತಿನ ಹೊಳೆ ಯೋಜನೆಯಲ್ಲಿ ಹೆಸರಘಟ್ಟ ಹಾಗೂ ತಿಪ್ಪಗೊಂಡನಹಳ್ಳಿ ಜಲಾಶಯಗಳಿಗೆ ಕುಡಿಯುವ ನೀರಿನ ಕೊರತೆ ಸರಿತೂಗಿಸಲು ಹಾಗೂ ಏಳು ಜಿಲ್ಲೆಗಳ 527 ಕೆರೆಗಳಿಗೆ

ಭಾಗಶಃ ನೀರು ತುಂಬಿಸಿ ಅವುಗಳ ಅಂತರ್ಜಲ ಅಭಿವೃದ್ದಿಗೆ ನೀರೊದಗಿಸುವ ಉದ್ದೇಶವಿದೆ. ಈ ಏಳು ಜಿಲ್ಲೆಗಳಿಗೆ ಕುಡಿಯುವ ನೀರಿಗಾಗಿ 15.029 ಟಿ.ಎಂ.ಸಿ ಹಾಗೂ 527 ಕೆರೆ ತುಂಬಿಸಲು 8.967 ಟಿ.ಎಂ.ಸಿ ಒಟ್ಟಾರೆ 24 ಟಿ ಎಂ ಸಿ ನೀರನ್ನು ಬಳಕೆ ಮಾಡಲಾಗುವುದು. ಪ್ರತಿವರ್ಷ ಜೂನ್ 15 ರಿಂದ ಅಕ್ಟೋಬರ್ 31 ರವರೆಗೆ ಮಾತ್ರ ನೀರನ್ನು ಈ ಯೋಜನೆಯಲ್ಲಿ ಬಳಕೆ ಮಾಡಲಾಗುವುದು ಎಂದು ಸಿದ್ದರಾಮಯ್ಯ ಅವರು ವಿವರಿಸಿದರು.

ಈ ಯೋಜನೆಯ ರೂಪು–ರೇಷೆ ಸಿದ್ದಪಡಿಸುವ ಸಂದರ್ಭದಲ್ಲಿ ಅರಣ್ಯ, ಪರಿಸರ ಹಾಗೂ ಜೀವ ವೈವಿಧ್ಯಗಳ ಹಾನಿಗೆ ಸಂಬಂಧಿಸಿದಂತೆ ವರದಿ ತಯಾರಿಸಲಾಗಿದೆ. ಇದರಲ್ಲಿ ಯಾವುದೇ ಜೀವ ವೈವಿಧ್ಯಕ್ಕೆ ಧಕ್ಕೆ ಬಾರದಂತೆ ಅತ್ಯಂತ ಎಚ್ಚರಿಕೆ ವಹಿಸಲಾಗಿದೆ. ಈ ಯೋಜನೆಯಿಂದ ಅತಿ ಸಂಕಷ್ಟಕ್ಕೆ ಒಳಗಾಗಿರುವ ಜನರಿಗೆ ಕುಡಿಯುವ ನೀರು ಒದಗಿಸುವ ಉದ್ದೇಶ ಮಾತ್ರ ಸರ್ಕಾರಕ್ಕೆ ಇದೆ. ಕೇವಲ 24 ಟಿಎಂಸಿ ನೀರನ್ನು ಎತ್ತಿನ ಹೊಳೆ ಯೋಜನೆಗೆ ಬಳಸುವುದರಿಂದ ದಕ್ಷಿಣ ಕನ್ನಡ ಹಾಗೂ ಉಡುಪಿ ಭಾಗದ ಜನರಿಗೆ ಯಾವುದೇ ಅನಾನುಕೂಲವಾಗುವುದಿಲ್ಲ ಎಂದು ಸಭೆಗೆ ಮುಖ್ಯಮಂತ್ರಿ ಅಭಯ ನೀಡಿದರು.

ಕುಡಿಯುವ ನೀರು ಜನರ ಮೂಲಭೂತ ಹಕ್ಕಾಗಿದೆ. ಇಂದಿನ ಸಭೆಯಲ್ಲಿ ಯೋಜನೆಯ ಪರ ಹಾಗೂ ವಿರೋಧವಿರುವ ಎಲ್ಲಾ ಜನಪ್ರತಿನಿಧಿಗಳೊಡನೆ ತಾಂತ್ರಿಕ ಹಾಗೂ ತಾಂತ್ರಿಕೇತರ ವಿಷಯಗಳ ಬಗ್ಗೆ ವಿವರವಾಗಿ ಚರ್ಚೆಯಾಗಿದೆ. ಕುಡಿಯುವ ನೀರು ಒದಗಿಸುವುದು ಸರ್ಕಾರದ ಕರ್ತವ್ಯ ಹಾಗೂ ಜವಾಬ್ದಾರಿಯಾಗಿದೆ. ಈ ಯೋಜನೆಯನ್ನು ಅನಿವಾರ್ಯವಾಗಿ ಹಾಗೂ ತುರ್ತಾಗಿ ಅನುಷ್ಠಾನಗೊಳಿಸಲೇಬೇಕಾಗಿದೆ. ರಾಜ್ಯದ ಯಾವುದೇ ಭಾಗದ ಜನರಿಗೆ ತೊಂದರೆ ಹಾಗೂ ಹಾನಿಯಾಗದಂತೆ ಸರ್ಕಾರ ಎಚ್ಚರಿಕೆ ವಹಿಸಲಿದೆ. ಯೋಜನೆಯ ಕುರಿತಂತೆ ಕೆಲವು ಜನರಲ್ಲಿದ್ದ ಅನುಮಾನಗಳು ಇದೀಗ ಪರಿಹಾರವಾಗಿದೆ. ಸಭೆಯಲ್ಲಿ ಪಾಲ್ಗೊಂಡ ಎಲ್ಲರಿಗೂ ಯೋಜನೆಯ ಅವಶ್ಯಕತೆಯ ಬಗ್ಗೆ ಮನವರಿಕೆಯಾಗಿದೆ ಎಂಬ ಭಾವನೆ ತಮ್ಮಲ್ಲಿದೆ ಎಂದು ಮುಖ್ಯಮಂತ್ರಿ ಹೇಳಿದರು.

ಜಲ ಸಂಪನ್ಮೂಲ ಸಚಿವ ಎಂ. ಬಿ. ಪಾಟೀಲ್, ಸಣ್ಣ ನೀರಾವರಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಟಿ. ಬಿ. ಜಯಚಂದ್ರ, ಅರಣ್ಯ, ಪರಿಸರ ಮತ್ತು ಜೀವಿ ಶಾಸ್ತ್ರ ಸಚಿವ ಬಿ. ರಮಾನಾಥ ರೈ, ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವ ಯು. ಟಿ. ಖಾದರ್, ಯುವಜನ ಸೇವೆಗಳು ಹಾಗೂ ಮೀನುಗಾರಿಕಾ ಸಚಿವ ಪ್ರಮೋದ್ ಮಧ್ವರಾಜ್, ಸಂಸದರಾದ ಆಸ್ಕರ್ ಫರ್ನಾಂಡೀಸ್, ನಳೀನ್ ಕುಮಾರ್ ಕಟೀಲ್ ಹಾಗೂ ಡಿ. ಕೆ. ಸುರೇಶ್, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲಾ ಜನಪ್ರತಿನಿಧಿಗಳು ಸಭೆಯಲ್ಲಿ ಹಾಜರಿದ್ದರು.

**********

ಟಿ ಸಿ ಎಂ ಬಿ